ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ

BENGALURU CENTRAL UNIVERSITY

ಸಂಖ್ಯೆ: ಬೆಸಿಯು/ಕು.ಸ/ಸಂಯೋಜನೆ/2018-19 ದಿನಾಂಕ: 21 MAY

## ಅಧಿಸೂಚನೆ

**ವಿಷಯ:** 2018-19ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧವಲ್ಲಿ ಪ್ರದತ್ತವಾದ ಹಾಗೂ ತಿದ್ದುಪಡಿ ಅಧಿನಿಯಮ 2015ರ. 7ನೇ ಪ್ರಕರಣದ ಅಧಿಕಾರದನ್ವಯ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯವು, 2018-19ನೇ ಸಾಲಿಗೆ ಬೆಂಗಳೂರಿನ **ಎಂ.ಎಲ್.ಎ ಅಕಾಡೆಮಿ ಆಫ್ ಹೈಯರ್ ಲರ್ನಿಂಗ್**,ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ * ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯ ಪರಿನಿಯಮಾವಳಿಯಂತೆ** | 180(ನೂರ ಎಂಭತ್ತು) |
| ಬಿ.ಬಿ.ಎ. | ವಿಶ್ವವಿದ್ಯಾಲಯ ಪರಿನಿಯಮಾವಳಿಯಂತೆ** | 60(ಅರವತ್ತು) |
| ಎಂ.ಕಾಂ. | ವಿಶ್ವವಿದ್ಯಾಲಯ ಪರಿನಿಯಮಾವಳಿಯಂತೆ | 40(ನಲವತ್ತು) |
| ಪಿ.ಜಿ.ಡಿಪ್ಲೊಮಾ ಇನ್ ಹ್ಯೂಮನ್ ರಿಸೋರ್ಸ್ ಮ್ಯಾನೇಜಮೆಂಟ್ | | 30(ಮೂವತ್ತು) |

**ಆಸ್ಟ್ರಿಕ್ ಗುರುತುಳ್ಳ ಕೋರ್ಸುಗಳು 2015-16ನೇ ಶೈಕ್ಷಣಿಕ ಸಾಲಿನಿಂದ 2019-20ನೇ ಸಾಲಿನವರೆಗೆ ಐದು ವರ್ಷಗಳ ಅವಧಿಯ ಶಾಶ್ವತ ಸಂಯೋಜನೆಯನ್ನು ಹೊಂದಿರುತ್ತದೆ. ವಿ.ವಿ. ಅಧಿಸೂಚನೆ ಸಂಖ್ಯೆ:ಎಸಿಎ-3/ಎ3/ಶಾ.ಸಂ./ಜಿಎಂಎಲ್/2015- 2017 ದಿ:31-08-2015. ಈ ಕೋರ್ಸುಗಳ ಶಾಶ್ವತ ಸಂಯೋಜನಾ ವಿದ್ಯಾರ್ಥಿ ಪ್ರಮಾಣವು ದಿ:31-08-2015ರ ಅಧಿಸೂಚನೆಯಲ್ಲಿ ನಮೂದಿಸಿರುವ ವಿದ್ಯಾರ್ಥಿ ಪ್ರಮಾಣಕ್ಕೆ ಸೀಮಿತವಾಗಿರುತ್ತದೆ.

---

ವಿ.ಸೂ: **2018-19ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ, ವಿಶ್ವವಿದ್ಯಾಲಯ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ 2019-20ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.**

---

*ಷರತ್ತುಗಳು:

1) ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2) ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3) ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4) ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5) ವಿಶ್ವವಿದ್ಯಾಲಯವು ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
6) ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.